# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/ /2022-23 ದಿನಾಂಕ:19-12-2022

## ವಾರ್ಡ್-91 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 19-12-2022 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ಪದ್ಮರಾಜ್, ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಪದ್ಮರಾಜ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ ಪೂರ್ವ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |
| 3 | ಶ್ರೀ ಕಾರ್ತಿಕ್ | ಕಿರಿಯ ಆರೋಗ್ಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರು ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.**

- ತಿಮ್ಮಯ್ಯ ರಸ್ತೆಯ ನಾರಾಯಣ ಸ್ಟ್ರೀಟ್‌ನ ಮೇಜರ್ ರೋಡ್ಸ್‌ವತಿಯಿಂದ ರಸ್ತೆ ಕಾಮಗಾರಿಗಳು ನಡೆಯುತ್ತಿದ್ದು ರಾತ್ರಿ ವೇಳೆಯಲ್ಲಿ ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ತೆಗೆಯದೆ ಹಾಗೆಯೇ ಬಿಟ್ಟು ಹೊಗುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಿಗೆ ಒಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಿಸಲು ಅವಶ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

- ವಾರ್ಡಿನಲ್ಲಿ ತಳ್ಳುವ ಗಾಡಿಗಳ ಕೊರತೆ ಇದ್ದು, ಸರಿಯಾಗಿ ಕಸ ವಿಲೇವಾರಿಯಾಗುತಿಲ್ಲದಿರುವುದು ಕಂಡು ಬಂದಿದ್ದು ಇದರ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರು ಬಂದಿರುತ್ತದೆ ಹಾಗೂ ಪೌರಕಾರ್ಮಿಕರನ್ನು ವಿಚಾರಿಸಿದ್ದಲ್ಲಿ ಅವರಿಗೆ ತಳ್ಳುವ ಗಾಡಿ (Push Cart) ಕೊರತೆ ಇದ್ದು ಆದಷ್ಟು ಬೇಗ ಇವರಿಗೆ ತಳ್ಳುವ ಗಾಡಿ (Push Cart) ನೀಡಲು ಪದೇ ಪದೇ ಚರ್ಚೆಯಾಗುತ್ತಿದ್ದರು ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಕಂಡುಬರುತ್ತಿದ್ದು ಆದ್ದರಿಂದ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ವಿಭಾಗದವರಿಗೆ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ನೋಡಲ್ ಅಧಿಕಾರಿರವರು ತಿಳಿಸಿರುತ್ತಾರೆ.

- ವಾರ್ಡ್‌ವಾರು ಪ್ರದೇಶದ ಸ್ಥಳಗಳಲ್ಲಿ ಸೊಳ್ಳೆ ನಿಯಂತ್ರಣ ಔಷಧಿಯನ್ನು ಸಿಂಪಡಿಸಲು ಸಭೆಯ ಗಮನಕ್ಕೆ ತಂದಿರುತ್ತಾರೆ, ಈ ಬಗ್ಗೆ ಚರ್ಚಿಸಲಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರಿಗೆ ವಾರ್ಡ್ ಪ್ರದೇಶದ ಆಯ್ದ ಸ್ಥಳಗಳಲ್ಲಿ ಔಷಧಿ ಸಿಂಪಡಿಸಲು ಸೂಚಿಸಿರುತ್ತಾರೆ ಮತ್ತು ರಸೆಲ್ ಮಾರುಕಟ್ಟೆ ಒಳಾಂಗಣದಲ್ಲಿರುವ ಅನುಪಯುಕ್ತ ವಸ್ತುಗಳನ್ನು ತೆರವುಗೊಳಿಸಿ ಸ್ವಚ್ಛಗೊಳಿಸಲು ಸಭಾ ಗಮನಕ್ಕೆ ತರಲಾಗಿ ಈ ಬಗ್ಗೆ ಚರ್ಚಿಸಲಾಗಿ ಹಾಜರಿದ್ದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ರವರಿಗೆ ಕ್ರಮವಹಿಸಲು ತಿಳಿಸಿರುತ್ತಾರೆ.

-2

- ಮೆಮೋರಿಯಲ್ ಪಾರ್ಕ್ ಅನ್ನು ಸೂಕ್ತ ರೀತಿಯಲ್ಲಿ ನಿರ್ವಹಣಾ ಕಾರ್ಯವನ್ನು ನಿರ್ವಹಿಸಲು ತೋಟಗಾರಿಕಾ ಇಲಾಖೆಯವರಿಗೆ ತಿಳಿಸಲು ಸೂಚಿಸಿರುತ್ತಾರೆ.

(ಅಧೀಕ್ಷಕ, ತೋಟಗಾರಿಕೆ ಇಲಾಖೆ)

- ಆಲ್ಬರ್ಟ್ ಸ್ಟ್ರೀಟ್‌ನ ಬೀದಿ ಬದಿ ದೀಪಗಳು ಸರಿಯಾಗಿ ಕೆಲಸ ಮಾಡದೇ ಸಾರ್ವಜನಿಕರಿಗೆ ವಾಹನ ಸವಾರರಿಗೆ ರಸ್ತೆಗಳಲ್ಲಿ ಓಡಾಡುವುದು, ವಾಹನ ಚಲಾಯಿಸಲು ತೊಂದರೆಯಾಗುತ್ತಿದ್ದೆ ಎಂದು ದೂರುಬಂದಿರುವುದರಿಂದ ರಸ್ತೆಯ ಬದಿಯ ಬೀದಿ ದೀಪಗಳನ್ನು ಪರಿಶೀಲಿಸಲು ಸೂಚಿಸಿದೆ.

<u>ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ಶಾಖೆ)</u>

- ನೋಡಲ್ ಅಧಿಕಾರಿರವರು ಮಾತನಾಡುತ್ತ ಗುರುತಿನ ಚೀಟಿಗಳನ್ನು (Voter List) ಪರಿಶೀಲನೆಗಳನ್ನು ಮಾಡಿ ಯಾರಾದರು (Voter ID) ಗಳು Delete ಆದ ಪಕ್ಷದಲ್ಲಿ ಗುರುತಿಸಿ (Voter List) ಗಳನ್ನು ಮಾಡಿಕೊಡಲು ಸಂಬಂಧಪಟ್ಟ ಕಂದಾಯ ಪರಿವೀಕ್ಷಕರಿಗೆ ತಿಳಿಸಿರುತ್ತಾರೆ. ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಲು ಕ್ಯಾಂಪ್‌ಗಳನ್ನು ನಡೆಸಲು ಸೂಚಿಸಿರುತ್ತಾರೆ ಮತ್ತು ಇದರ ಬಗ್ಗೆ ಆಟೋ ಪ್ರಚಾರ ಮಾಡಲು ಜೂನಿಯರ್ ಹೆಲ್ತ್ ಇನ್ಸ್‌ಪೆಕ್ಟರ್‌ಗಳಿಗೆ ತಿಳಿಸಿರುತ್ತಾರೆ.

- ಗಾರ್ಬೇಜ್ ಗುತ್ತಿಗೆದಾರರು ಕಸವಿಲೇವಾರಿ ಸಮರ್ಪಕವಾಗಿ ನಿರ್ವಹಿಸದೆ ಇರುವ ಕಾರಣ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು. ಕಸ ವಿಲೇವಾರಿ ಸರಿಯಾದ ಸಮಯಕ್ಕೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ನಿರ್ವಹಣೆ ರವರಿಗೆ ತಿಳಿಸಲು ಸೂಚಿಸಿರುತ್ತಾರೆ.

<u>ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ಶಿವಾಜಿನಗರ)</u>

- ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು ಹಾಗು ಹಾಜರಿದ್ದ ಸಾರ್ವಜನಿಕರಿಗೆ ಕಸ ವಿಲೇವಾರಿ ಬಗ್ಗೆ ಅದಷ್ಟು ಗಮನವಹಿಸಿ ಸಹಕರಿಸಿದಲ್ಲಿ ದಿನನಿತ್ಯದ ಕಸ ವಿಲೇವಾರಿ ಸಮಯದಲ್ಲಿ ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆದಾರರು ಸಹಾಯವಾಗುತ್ತದೆ.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸುತ್ತಾ ಮೇಲೆ ತಿಳಿಸಿರುವ ಎಲ್ಲಾ ಆಕ್ಷೇಪಣೆಗಳನ್ನು ಸಂಬಂಧಪಟ್ಟ ಇಲಾಖೆರವರಿಗೆ ತಿಳಿಸಿ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ನಡವಳಗಳನ್ನು ತಯಾರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿರುತ್ತಾರೆ.

(ಪ್ರವೀಣ್.ಎನ್.ಎಂ)
ಸ.ಅ.&ಕಾರ್ಯದರ್ಶಿ
ವಾರ್ಡ್-91, ಭಾರತಿನಗರ